# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 52
ಸದಸ್ಯರ ಹೆಸರು : ಶ್ರೀಮಧು ಜಿ. ಮಾದೇಗೌಡ (ಪದವೀಧರರ ಕ್ಷೇತ್ರ)
ಉತ್ತರಿಸಬೇಕಾದ ದಿನಾಂಕ : 09.12.2024
ಉತ್ತರಿಸುವವರು : ಉನ್ನತ ಶಿಕ್ಷಣ ಸಚಿವರು.

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ಕಾಲೇಜು ಶಿಕ್ಷಣ ಇಲಾಖೆ ವ್ಯಾಪ್ತಿಯ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳ ಅತಿಥಿ ಉಪನ್ಯಾಸಕರಿಗೆ ಆರೋಗ್ಯ ವಿಮೆ ಹಾಗೂ ಸೇವಾವಧಿ ಆಧರಿಸಿ ಇಡಗಂಟು ನೀಡುವ ಸರ್ಕಾರದ ಆದೇಶ ಅನುಷ್ಠಾನ ಆಗಿದೆಯೇ; | ಕಾಲೇಜು ಶಿಕ್ಷಣ ಇಲಾಖಾ ವ್ಯಾಪ್ತಿಯ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಲ್ಲಿ ಅತಿಥಿ ಉಪನ್ಯಾಸಕರುಗಳಾಗಿ ಸೇವೆ ಸಲ್ಲಿಸಿದ 60 ವರ್ಷ ಮೀರಿದ ಅತಿಥಿ ಉಪನ್ಯಾಸಕರುಗಳಿಗೆ ಭದ್ರತಾ ರೂಪದಲ್ಲಿ ವಾರ್ಷಿಕ ರೂ.50,000/- ದಂತೆ ಗರಿಷ್ಠ 5.00 ಲಕ್ಷಗಳ ಮೊತ್ತದ ಇಡಿಗಂಟಿನ ಸೌಲಭ್ಯವನ್ನು ನೀಡಲು ಹಾಗೂ ಅತಿಥಿ ಉಪನ್ಯಾಸಕರ ಆರೋಗ್ಯ ದೃಷ್ಟಿಯಿಂದ ವಾರ್ಷಿಕ ರೂ.5.00 ಲಕ್ಷಗಳ ಆರೋಗ್ಯ ವಿಮಾ ಸೌಲಭ್ಯವನ್ನು ನೀಡುವ ನಿಟ್ಟಿನಲ್ಲಿ (ಅತಿಥಿ ಉಪನ್ಯಾಸಕರಿಂದ ವಂತಿಗೆ ರೂಪದಲ್ಲಿ ಮಾಸಿಕ ರೂ.400/-ಮತ್ತು ಸರ್ಕಾರದಿಂದ ರೂ.400/- ಒಟ್ಟು ರೂ.800/-) ಆರೋಗ್ಯ ವಿಮಾ ಸೌಲಭ್ಯವನ್ನು ಅನುಷ್ಠಾನಗೊಳಿಸಲು ಸರ್ಕಾರದ ಆದೇಶ ಸಂಖ್ಯೆ ಇಡಿ 36 ಡಿಸಿಇ 2024 (ಇ), ದಿನಾಂಕ: 04-03-2024 ರಲ್ಲಿ ಮಂಜೂರಾತಿ ನೀಡಲಾಗಿರುತ್ತದೆ. ಸದರಿ ಆದೇಶವು ದಿನಾಂಕ:01.01.2024 ರಿಂದ ಜಾರಿಗೆ ಬಂದಿರುತ್ತದೆ.<br><br>2024ನೇ ಸಾಲಿಗೆ ಅನ್ವಯಿಸುವಂತೆ ಸುಮಾರು 27 ಅತಿಥಿ ಉಪನ್ಯಾಸಕರು ನಿವೃತ್ತಿ ಹೊಂದಲಿದ್ದು, ಸದರಿಯವರಿಗೆ ಇಡಿಗಂಟು ಯೋಜನೆಯನ್ನು ಜಾರಿಗೊಳಿಸಲು. ಗರಿಷ್ಠ ರೂ. 135.00 ಲಕ್ಷಗಳ ಅನುದಾನ ಅವಶ್ಯ ವಿದ್ದು, ಈ ಅನುದಾನ ದ ಲಭ್ಯತೆಯ ಬಗ್ಗೆ ಪರಿಶೀಲಿಸಲಾಗುತ್ತಿದ್ದು, ಸದರಿ ಅನುದಾನ ಲಭ್ಯವಾದ ಕೂಡಲೇ ಅನುಷ್ಠಾನಗೊಳಿಸಲು ಕ್ರಮವಹಿಸಲಾಗುವುದು.<br><br>ಮುಂದುವರೆದು, ಅತಿಥಿ ಉಪನ್ಯಾಸಕರಿಗೆ ಆರೋಗ್ಯ ವಿಮೆ ನೀಡುವ ಸಂಬಂಧ ಟೆಂಡರ್ ಪ್ರಕ್ರಿಯೆ ಕೈಗೊಳ್ಳುವ ಬಗ್ಗೆ ಪರಿಶೀಲನೆಯಲ್ಲಿದೆ. |
| ಆ) | ಇಲ್ಲದಿದ್ದಲ್ಲಿ, ಜಾರಿ ಆಗದಿರುವುದಕ್ಕೆ ಕಾರಣಗಳೇನು: ಎಂದಿನಿಂದ ಅನುಷ್ಠಾನಕ್ಕೆ ಬರಲಿದೆ; (ವಿವರ ನೀಡುವುದು) | |
| ಇ) | ಅತಿಥಿ ಉಪನ್ಯಾಸಕರಿಗೆ ಸೇವಾವಧಿ ಆಧರಿಸಿ ಇಡಗಂಟು ನೀಡಲು ರೂಪಿಸಿರುವ ಮಾನದಂಡಗಳೇನು; (ವಿವರ ನೀಡುವುದು) | ಕಾಲೇಜು ಶಿಕ್ಷಣ ಇಲಾಖೆಯ ವ್ಯಾಪ್ತಿಯ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಲ್ಲಿ ಅತಿಥಿ ಉಪನ್ಯಾಸಕರುಗಳಾಗಿ ಸೇವೆ ಸಲ್ಲಿಸಿದ 60 ವರ್ಷ ಮೀರಿದ ಅತಿಥಿ ಉಪನ್ಯಾಸಕರುಗಳಿಗೆ ಭದ್ರತಾ ರೂಪದಲ್ಲಿ ವಾರ್ಷಿಕ ರೂ.50,000/- ದಂತೆ ಗರಿಷ್ಠ 5.00 ಲಕ್ಷಗಳ ಮೊತ್ತದ ಇಡಿಗಂಟಿನ ಸೌಲಭ್ಯವನ್ನು ನೀಡಲು ಮಂಜೂರಾತಿ ನೀಡಿ ಆದೇಶಿಸಲಾಗಿದೆ. |
| ಈ) | ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಲ್ಲಿ ಸೇವೆ ಸಲ್ಲಿಸಿ 60ವರ್ಷ ಪೂರ್ಣಗೊಳಿಸಿ ಅತಿಥಿ ಉಪನ್ಯಾಸಕ ವೃತ್ತಿಯಿಂದ ಈಗಾಗಲೇ ನಿವೃತ್ತಿ ಹೊಂದಿರುವ ಉಪನ್ಯಾಸಕರಿಗೆ ಸರ್ಕಾರ ಇಡಗಂಟು ನೀಡುವುದೇ; (ವಿವರ ನೀಡುವುದು) | |

| | | |
|---|---|---|
| **ಉ)** | ಅತಿಥಿ ಉಪನ್ಯಾಸಕರು ಕರ್ತವ್ಯ ಅವಧಿಯಲ್ಲಿ ಮೃತಪಟ್ಟರೆ, ಅವರ ಅವಲಂಬಿತರಿಗೆ ಯಾವ ರೀತಿಯ ಸೌಲಭ್ಯಗಳನ್ನು ಸರ್ಕಾರ ಒದಗಿಸಲಿದೆ? (ವಿವರ ನೀಡುವುದು) | ಅತಿಥಿ ಉಪನ್ಯಾಸಕರು ಕರ್ತವ್ಯದ ಅವಧಿಯಲ್ಲಿ ಮೃತಪಟ್ಟರೆ ಅವರ ಅವಲಂಭಿತರಿಗೆ ಯಾವುದೇ ಸೌಲಭ್ಯಗಳನ್ನು ನೀಡಲು ನಿಯಮಗಳಲ್ಲಿ ಅವಕಾಶವಿರುವುದಿಲ್ಲ. |

**ಸಂಖ್ಯೆ:ಇಡಿ 382 ಡಿಸಿಇ 2024(ಇ)**

**(ಡಾ.ಎಂ.ಸಿ.ಸುಧಾಕರ್)**
ಉನ್ನತ ಶಿಕ್ಷಣ ಸಚಿವರು.